ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೦೯

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೇಳನೇ ಅಧಿವೇಶನ**

**ಶುಕ್ರವಾರ, ದಿನಾಂಕ: ೧೩ನೇ ಫೆಬ್ರವರಿ, ೨೦೧೫**

---

**ಸಮೂಹ – V**

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು
೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು
೩. ವಸತಿ ಸಚಿವರು
೪. ಅಬಕಾರಿ ಸಚಿವರು
೫. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು
೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು
೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

## ವಸತಿ ರಹಿತರಿಗೆ ಮನೆ ಹಂಚಿಕೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೧ (೧೨೪೧) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ವಿವಿಧ ಯೋಜನೆಗಳಾದ ಬಸವ ವಸತಿ ಯೋಜನೆ, ಇಂದಿರಾ ಆವಾಸ್ ಯೋಜನೆ, ಅಂಬೇಡ್ಕರ್ ವಸತಿ ಯೋಜನೆ, ಗ್ರಾಮೀಣ ನಿವೇಶನ ಯೋಜನೆಗಳಲ್ಲಿ ವಸತಿ ರಹಿತ ಬಡವರಿಗೆ ವಸತಿ ನಿರ್ಮಾಣಕ್ಕೆ ಅನುದಾನ ಕೊಡುತ್ತಿರುವುದು ನಿಜವೇ ; ಕಳೆದ ಎರಡು ವರ್ಷದಲ್ಲಿ ವರ್ಷವಾರು, ಜಿಲ್ಲಾವಾರು ಮತ್ತು ಜಾತಿವಾರು ಎಷ್ಟು ಮನೆಗಳನ್ನು ಹಂಚಲಾಗಿದೆ ; (ವಿವರ ಒದಗಿಸುವುದು)

(ಆ) ಸಮಾಜದಲ್ಲಿ ಅತ್ಯಂತ ಸಣ್ಣ ಹಾಗೂ ಹಿಂದುಳಿದ ವರ್ಗವಾದ ಗಾಣಿಗ ಸಮಾಜಕ್ಕೆ ಬೆಂಗಳೂರು ಗ್ರಾಮಾಂತರ, ಮಂಡ್ಯ, ಮೈಸೂರು, ಚಾಮರಾಜನಗರ, ಚಿಕ್ಕಮಗಳೂರು, ತುಮಕೂರು, ಕೋಲಾರ, ಶಿವಮೊಗ್ಗ, ಹಾಸನ, ರಾಮನಗರ, ಉಡುಪಿ, ಕೊಡಗು, ಉತ್ತರ ಕನ್ನಡ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಎಷ್ಟು ಮನೆಗಳನ್ನು ಕಳೆದ ಮೂರು ವರ್ಷದಲ್ಲಿ ವಸತಿ ರಹಿತರಿಗೆ ಕೊಡಲಾಗಿದೆ ? (ಜಿಲ್ಲಾವಾರು ವಿವರವನ್ನು ಒದಗಿಸುವುದು)

## ಶಾಲಾ ಕಾಲೇಜುಗಳ ಶಿಕ್ಷಕ/ಉಪನ್ಯಾಸಕರಿಗೆ ನೀಡುವ ವಿಶೇಷ ಭತ್ಯೆಯಲ್ಲಿ ಅನುಸರಿಸುವ ಮಾನದಂಡ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೨೨ (೧೨೭೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಕಾಲೇಜುಗಳ ಶಿಕ್ಷಕ/ಉಪನ್ಯಾಸಕರಿಗೆ ರೂ. ೩೦೦, ರೂ. ೪೦೦ ಮತ್ತು ರೂ. ೫೦೦ ವಿಶೇಷ ಭತ್ಯೆಯನ್ನು ನೀಡುವಲ್ಲಿ ತಾರತಮ್ಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಮೇಲಿನ ವಿಶೇಷ ಭತ್ಯೆಯನ್ನು ಪ್ರಾಥಮಿಕ/ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳ ಶಿಕ್ಷಕ/ಉಪನ್ಯಾಸಕರಿಗೆ ನೀಡುವಲ್ಲಿ ಅನುಸರಿಸಿದ ಮಾನದಂಡಗಳೇನು ;

(ಇ) ೬ನೇ ವೇತನ ಆಯೋಗದ ವರದಿಯ ಅನುಷ್ಠಾನದ ಬಳಿಕ ಶಿಕ್ಷಕ/ಉಪನ್ಯಾಸಕರ ವೇತನ ತಾರತಮ್ಯ ಸಮಸ್ಯೆಯನ್ನು ಮನಗಂಡು ಈ ವಿಶೇಷ ಭತ್ಯೆಯನ್ನು ನೀಡಿರುವುದರಿಂದ ಹಾಗೂ ೬ನೇ ವೇತನ ಸಮಿತಿಯ ಅನುಷ್ಠಾನದ ಬಳಿಕ ಶಿಕ್ಷಕ/ಉಪನ್ಯಾಸಕರುಗಳ ವೇತನಶ್ರೇಣಿಯಲ್ಲಿ ಯಾವುದೇ ಬದಲಾವಣೆಯಾಗದಿರುವುದರಿಂದ ಈ ವಿಶೇಷ ಭತ್ಯೆ ರಾಜ್ಯದ ಎಲ್ಲಾ ಶಿಕ್ಷಕ/ ಉಪನ್ಯಾಸಕರಿಗೆ ಸಮನಾಗಿ ಅನ್ವಯಿಸುವಂತೆ ಆದೇಶ ಹೊರಡಿಸಿ ತಾರತಮ್ಯ ನಿವಾರಿಸಲು ಸರಕಾರ ಯಾವ ಕ್ರಮ ಕೈಗೊಳ್ಳಲಿದೆ ?;

## ಕೆ.ಆರ್.ಐ.ಡಿ.ಎಲ್. ನ (ಹಿಂದಿನ ಭೂಸೇನಾ ನಿಗಮ) ಕಾಮಗಾರಿಗಳು

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೩ (೧೨೪೬) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಆರ್.ಐ.ಡಿ.ಎಲ್. (ಹಿಂದಿನ ಭೂಸೇನಾ ನಿಗಮ) ಸಂಸ್ಥೆಗೆ ಸರ್ಕಾರದ ವಿವಿಧ ಇಲಾಖೆಗಳಿಂದ ಹಾಗೂ ನಿಗಮ ಮಂಡಳಿಗಳಿಂದ ೨೦೧೦ ರಿಂದ ಇಂದಿನವರೆವಿಗೂ ವಹಿಸಿದ ಕಾಮಗಾರಿಗಳು ಎಷ್ಟು ; ಆಡಳಿತಾತ್ಮಕ ಅನುಮೋದನೆಗೊಂಡ ಮೊತ್ತ ಎಷ್ಟು ; ಬಿಡುಗಡೆ ಮಾಡಲಾದ ಅನುದಾನ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕೆ.ಆರ್.ಐ.ಡಿಎಲ್ ಸಂಸ್ಥೆಯು ೨೦೧೦ ರಿಂದ ಇಂದಿನವರೆವಿಗೂ ಆಡಳಿತಾತ್ಮಕ ಅನುಮೋದನೆ, ಅನುದಾನ ಬಿಡುಗಡೆಯಾಗದೆ ನಿರ್ವಹಿಸಿದ ಕಾಮಗಾರಿಗಳು ಹಾಗೂ ಮೊತ್ತದ ಜಿಲ್ಲಾವಾರು ವಿವರ ಮಾಹಿತಿ ಒದಗಿಸುವುದು ;

(ಇ) ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನಕ್ಕಿಂತ ಹೆಚ್ಚುವರಿ ವೆಚ್ಚ ಮಾಡಿರುವ ಪ್ರಕರಣಗಳಲ್ಲಿ ಯಾರನ್ನು ಜವಾಬ್ದಾರಿ ಮಾಡಲಾಗಿದೆ ; ಸಂಬಂಧಿಸಿದ ನೌಕರರಿಂದ ವಸೂಲಿ ಮಾಡಿದ ಮೊತ್ತ ಎಷ್ಟು ; (೨೦೧೦ ರಿಂದ ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಮನ್ನಾ ಮಾಡಿರುವ ಹೆಚ್ಚುವರಿ ಮೊತ್ತದ ವಿವರವನ್ನು ೨೦೧೦ ರಿಂದ ಅನ್ವಯಿಸುವಂತೆ ಜಿಲ್ಲಾವಾರು ಮಾಹಿತಿ ನೀಡುವುದು ?

## ರಾಜ್ಯದಲ್ಲಿ ಕ್ಷೀರ ಭಾಗ್ಯ ಯೋಜನೆಯ ಅನುಷ್ಠಾನ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೨೪ (೧೨೩೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕ್ಷೀರ ಭಾಗ್ಯ ಯೋಜನೆಯನ್ವಯ ಪ್ರತಿ ವಿದ್ಯಾರ್ಥಿಗೆ ಎಷ್ಟು ಗ್ರಾಂ ಹಾಲಿನ ಪುಡಿಯನ್ನು ನಿಗದಿಗೊಳಿಸಲಾಗಿದೆ ;

(ಆ) ಪ್ರತಿ ವಿದ್ಯಾರ್ಥಿಗೆ ನಿಗದಿಗೊಳಿಸಲಾದ ಹಾಲಿನ ಪುಡಿಯ ಪ್ರಮಾಣ ಸರಿಯಾಗಿ ಲಭ್ಯವಾಗುತ್ತಿದೆಯೇ ಎಂಬುದರ ಮೇಲ್ವಿಚಾರಣೆಯನ್ನು ಯಾವ ರೀತಿ ವಹಿಸಲಾಗುತ್ತಿದೆ ;

(ಇ) ಕ್ಷೀರ ಭಾಗ್ಯ ಯೋಜನೆಯಡಿಯಲ್ಲಿ ಬಳಕೆಯಾಗುತ್ತಿರುವ ಹಾಲಿನ ಪುಡಿಯನ್ನು ಯಾವ ಸಾಲಿನಲ್ಲಿ ಉತ್ಪಾದನೆ ಮಾಡಲಾಗಿದೆ ; ಹಾಲಿನ ಪುಡಿಯ ಪ್ಯಾಕೇಟುಗಳ ಮೇಲೆ ಅವಶ್ಯಕ ಮಾಹಿತಿಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕ್ಷೀರ ಭಾಗ್ಯ ಯೋಜನೆಗೆ ಈವರೆಗೆ ಸರ್ಕಾರ ಎಷ್ಟು ಅನುದಾನವನ್ನು ಬಿಡುಗಡೆ ಮಾಡಿದೆ ? (ಈ ಬಗ್ಗೆ ಆದೇಶದ ಪ್ರತಿಯನ್ನು ಒದಗಿಸುವುದು)

## ಬಿಸಿ ಊಟ ಅಡಿಗೆ ಸಹಾಯಕರ ವೇತನ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೨೫ (೧೧೫೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಬಿಸಿ ಊಟ ಅಡುಗೆ ಸಹಾಯಕರ ಸಂಖ್ಯೆ ಎಷ್ಟು ;

(ಆ) ಬಿಸಿ ಊಟ ಅಡುಗೆ ಸಹಾಯಕರಿಗೆ ನಿಗದಿಪಡಿಸಿದ ವೇತನ ಎಷ್ಟು ; ಅದು ತುಂಬಾ ಕನಿಷ್ಟ ಎನಿಸುವುದಿಲ್ಲವೇ ;

(ಇ) ಹಾಗಿದ್ದರೆ, ವೇತನವನ್ನು ಹೆಚ್ಚಿಸುವ ಆಲೋಚನೆ ಸರ್ಕಾರಕ್ಕೆ ಇದೆಯೇ ?

## ಮಹಾತ್ಮಾ ಗಾಂಧಿ ಉದ್ಯೋಗ ಖಾತರಿ ಯೋಜನೆಯಡಿ ಕೈಗೊಂಡ ಕಾಮಗಾರಿಗಳ ವಿವರ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೨೬ (೧೨೨೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ, ಹಾವೇರಿ ಜಿಲ್ಲೆಗಳಲ್ಲಿ ೨೦೧೩–೧೪ ಹಾಗೂ ೨೦೧೪–೧೫ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ; ಮೊತ್ತಗಳ ವಿವರ ಒದಗಿಸುವುದು ;

(ಆ) ಸದರಿ ಕಾಮಗಾರಿಗಳಿಗೆ ಬಿಡುಗಡೆಯಾದ ಹಣವೆಷ್ಟು ; ಬಿಡುಗಡೆಗೆ ಬಾಕಿ ಇರುವ ಮೊತ್ತವೆಷ್ಟು ;

(ಇ) ಬಿಡುಗಡೆಯಾಗದಿದ್ದಲ್ಲಿ, ಇದಕ್ಕೆ ಕಾರಣವೇನು ;

(ಈ) ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕೊಳಚೆ ನಿರ್ಮೂಲನ ಮಂಡಳಿಯಿಂದ ಮನೆಗಳನ್ನು ನಿರ್ಮಿಸಲು ಮಾನದಂಡ

**ಶ್ರೀ ಡಿ.ಯು. ಮಲ್ಲಿಕಾರ್ಜುನ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೭ (೧೧೬೩) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಬೆಂಗಳೂರು ದಕ್ಷಿಣ ವ್ಯಾಪ್ತಿಯಲ್ಲಿರುವ ಕೊಳಚೆ ಪ್ರದೇಶಗಳ ಸಂಖ್ಯೆ ಎಷ್ಟು ; (ವಿಸ್ತೀರ್ಣವಾರು ವಿವರ ನೀಡುವುದು)

(ಆ) ಕಳೆದ ಎರಡು ವರ್ಷಗಳಿಂದ ಈ ವ್ಯಾಪ್ತಿಗೆ ಬರುವ ಪ್ರದೇಶಗಳಿಗೆ ಕೊಳಚೆ ನಿರ್ಮೂಲನ ಮಂಡಳಿಯಿಂದ ಯಾವ ಯೋಜನೆಯಡಿ ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ ;

(ಇ) ಮಂಡಳಿಯ ವತಿಯಿಂದ ಮನೆಗಳ ಹಂಚಿಕೆ ಮಾಡುವಾಗ ಅನುಸರಿಸಲಾಗುವ ಮಾನದಂಡಗಳು ಯಾವುವು ? (ವಿವರ ನೀಡುವುದು)

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಯೋಜನೆಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೮ (೧೧೯೯) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಪ್ರಗತಿಯಲ್ಲಿರುವ ಯೋಜನೆಗಳಾವುವು ; ಅವುಗಳಿಗೆ ಮೀಸಲಿಟ್ಟ ಹಣವೆಷ್ಟು ; (ತಾಲ್ಲೂಕುವಾರು, ಯೋಜನಾವಾರು ವಿವರ ನೀಡುವುದು)

(ಆ) ಇಲಾಖಾ ವತಿಯಿಂದ ಹಮ್ಮಿಕೊಳ್ಳಲು ಉದ್ದೇಶಿಸಿರುವ ಯೋಜನೆಗಳಾವುವು ; ಅವುಗಳ ರೂಪುರೇಷೆಗಳೇನು ; (ಯೋಜನಾವಾರು ವಿವರ ನೀಡುವುದು)

(ಇ) ಪ್ರಸಕ್ತ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಸದರಿ ಇಲಾಖೆ ಇದುವರೆಗೆ ಸಾಧಿಸಿದ ಪ್ರಗತಿ ಏನು ? (ವಿವರ ಒದಗಿಸುವುದು)

## ಸಾಮಾನ್ಯ ಆಡಳಿತ ಮಂಡಳಿಗಳು ನಡೆಸುತ್ತಿರುವ ಅನುದಾನ ರಹಿತ ಪ್ರಥಮ ದರ್ಜೆ ಕಾಲೇಜುಗಳು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೨೯ (೧೨೭೧) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ದಿ: ೧–೬–೧೯೮೭ ರಿಂದ ೧–೩–೧೯೯೫ ರವರೆಗೆ ಪ್ರಾರಂಭವಾದ ಸಾಮಾನ್ಯ ಆಡಳಿತ ಮಂಡಳಿಗಳು ನಡೆಸುತ್ತಿರುವ ಅನುದಾನ ರಹಿತ ಪ್ರಥಮ ದರ್ಜೆ ಕಾಲೇಜುಗಳು ಎಷ್ಟು ; ಈ ಕಾಲೇಜುಗಳ ಆಡಳಿತ

ಮಂಡಳಿಯವರು ಈ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಲುವಾಗಿ ಸರ್ಕಾರಕ್ಕೆ ಮನವಿ ಸಲ್ಲಿಸಿದ ಸಂಗತಿ ನಿಜವೇ ;

(ಆ) ಈ ಅವಧಿಯಲ್ಲಿ ಪ್ರಾರಂಭವಾಗಿರುವ ಸಾಮಾನ್ಯ ಆಡಳಿತಗಳು ನಡೆಸುತ್ತಿರುವ ಖಾಸಗಿ ಪ್ರಥಮ ದರ್ಜೆ ಕಾಲೇಜುಗಳ ಪೈಕಿ ಅನುದಾನ ಪಡೆಯಲು ೮೦ ಕಾಲೇಜುಗಳ ಆಡಳಿತ ಮಂಡಳಿಯವರು ಅವಶ್ಯವಿರುವ ಎಲ್ಲ ಮಾಹಿತಿ ಒದಗಿಸಿದ ಸಂಗತಿ ನಿಜವೇ ; ಆ ಕಾಲೇಜುಗಳ ಹೆಸರು ಹಾಗೂ ಆಡಳಿತ ಮಂಡಳಿಯ ಹೆಸರು ಒದಗಿಸುವುದು ;

(ಇ) ಅವಶ್ಯವಿರುವ ಎಲ್ಲ ಮಾಹಿತಿ ಒದಗಿಸಿದ ೮೦ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ ಸರ್ಕಾರದ ಮೇಲೆ ಪ್ರತಿ ವರ್ಷ ಎಷ್ಟು ಕೋಟಿ ರೂ. ಆರ್ಥಿಕ ಹೊರೆ ಬೀಳುವುದು ;

(ಈ) ಈ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಿದಲ್ಲಿ (Grant-in-aid ಮಾಡಿದಲ್ಲಿ) ಕೇಂದ್ರ ಸರ್ಕಾರವು ಏನಾದರೂ ಆರ್ಥಿಕ ನೆರವು ನೀಡುವುದೇ, ನೀಡುವುದಾದಲ್ಲಿ ಎಷ್ಟು ನೀಡುವುದು ಹಾಗೂ ಎಷ್ಟು ವರ್ಷಕ್ಕೆ ನೀಡುವುದು ; (ವಿವರ ಒದಗಿಸುವುದು) ಈ ೮೦ ಕಾಲೇಜುಗಳ ವೇತನಾನುದಾನಕ್ಕೆ ಒಳಪಡಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಉ) ಮುಂದಿನ ವರ್ಷದ ಆಯವ್ಯಯದಲ್ಲಿ ಈ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಹಣ ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಊ) ಕೇಂದ್ರ ಸರ್ಕಾರವು ಹೆಚ್ಚಿನ ಆರ್ಥಿಕ ನೆರವು ನೀಡುತ್ತಿರುವುದರಿಂದ ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ ಆರ್ಥಿಕ ಇಲಾಖೆಗೆ ಮನದಟ್ಟುವಂತೆ ಮಾಹಿತಿ ಒದಗಿಸಿ ಅನುದಾನಕ್ಕೆ ಒಳಪಡಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಗ್ರಾಮೀಣ ವ್ಯಾಸಂಗ ದೃಢೀಕರಣ ಪತ್ರ ನೀಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೩೦ (೧೨೬೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಗ್ರಾಮಿಣ ಪ್ರದೇಶದ ವ್ಯಾಸಂಗ ದೃಢೀಕರಣ ಪತ್ರ ನೀಡುವ ಸಂಬಂಧ ಗ್ರಾಮೀಣ ಮೀಸಲಾತಿ ಅಧಿನಿಯಮದ ನಿಯಮಗಳನ್ನು ಸರಿಯಾಗಿ ಪಾಲಿಸದೆ ಮನಸ್ಸಿಗೆ ಬಂದಂತೆ ದೃಢೀಕರಣ ಪತ್ರಗಳನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಕುರಿತು ಏನು ಕ್ರಮ ಕೈಗೊಳ್ಳಲಾಗಿದೆ ; (ವಿವರವಾದ ಮಾಹಿತಿ ಕೊಡುವುದು)

(ಇ) ತುಮಕೂರು ಜಿಲ್ಲೆಯ ಗುಬ್ಬಿ ತಾಲ್ಲೂಕು ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ತಾಲ್ಲೂಕಿನ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಪ್ರೌಢಶಾಲಾ ವಿಭಾಗದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಗ್ರಾಮೀಣ ಪ್ರದೇಶದ ವ್ಯಾಸಂಗ ದೃಢೀಕರಣ ಪತ್ರ ನೀಡಬಹುದೇ ;

(ಈ) ನೀಡಬಹುದಾಗಿದ್ದರೆ, ಯಾವ ದಿನಾಂಕದಿಂದ ಎಲ್ಲಿಯವರೆಗೆ ನೀಡಬೇಕು ;

(ಉ) ನೀಡಬಾರದ್ದಾಗಿದ್ದರೆ, ಯಾವ ದಿನಾಂಕದಿಂದ ನೀಡಬಾರದು ಏಕೆ ? (ವಿವರವಾದ ಮಾಹಿತಿ ನೀಡುವುದು)

## ಉದ್ಯೋಗಿನಿ ಯೋಜನೆ

**ಶ್ರೀಮತಿ ತಾರಾಅನೂರಾಧಾ (ನಾಮನಿರ್ದೇಶನ ಹೊಂದಿದವರು) –**

೧೩೧ (೧೨೬೭) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ 'ಉದ್ಯೋಗಿನಿ ಯೋಜನೆ' ಯಡಿ ಸಾಲ ಕೋರಿ ಮಹಿಳೆಯರಿಂದ ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ ; (ವರ್ಷವಾರು ಮತ್ತು ಜಿಲ್ಲಾವಾರು ವಿವರ ನೀಡುವುದು)

(ಆ) ಆ ಪೈಕಿ ಎಷ್ಟು ಅರ್ಜಿಗಳಿಗೆ ಸಾಲ ಮಂಜೂರಾತಿ ಮಾಡಲಾಗಿದೆ ; (ವರ್ಷವಾರು ಮತ್ತು ಜಿಲ್ಲಾವಾರು ವಿವರ ನೀಡುವುದು)

(ಇ) ಮುಂದಿನ ದಿನಗಳಲ್ಲಿ ಉಳಿಕೆಯಾದ ಅರ್ಜಿದಾರರ ಕೋರಿಕೆಗಳನ್ನು ಪರಿಗಣಿಸಲು ಸರ್ಕಾರ ಜಿಲ್ಲೆ ಮತ್ತು ತಾಲ್ಲೂಕುಗಳಿಗೆ ನಿಗದಿಪಡಿಸಿರುವ ಫಲಾನುಭವಿಗಳ ಸಂಖ್ಯೆಯನ್ನು ಹೆಚ್ಚಿಸಲು ಚಿಂತಿಸುವುದೇ ;

(ಈ) ಮಹಿಳಾ ಅಭಿವೃದ್ಧಿ ನಿಗಮದಿಂದ ಗರಿಷ್ಠ ಹಣ ಪಡೆದು, ಸಾಲವನ್ನು ಮಂಜೂರು ಮಾಡಲು ಬ್ಯಾಂಕುಗಳು ಅರ್ಜಿದಾರರುಗಳಿಗೆ ತೊಂದರೆಗಳನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ?

## ಉದ್ಯಾನವನಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಕಾರ್ಯಕ್ರಮಗಳು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೧೩೨ (೧೨೪೯) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಕಬ್ಬನ್ ಪಾರ್ಕ್, ಲಾಲ್‌ಬಾಗ್ ಹಾಗೂ ರಾಜ್ಯದಲ್ಲಿರುವ ಉದ್ಯಾನವನಗಳಲ್ಲಿ ಪ್ರತಿ ಭಾನುವಾರ ಕನ್ನಡ ಮತ್ತು ಸಂಸ್ಕೃತಿಯ ಪ್ರತೀಕವಾದ ನಾಟಕಗಳು, ಮನರಂಜನಾ ಕಾರ್ಯಕ್ರಮಗಳನ್ನು ಏರ್ಪಡಿಸಲು ಸರ್ಕಾರ ಚಿಂತಿಸುವುದೇ ;

(ಆ) ನಾಟಕ/ಮನೋರಂಜನಾ ಕಾರ್ಯಕ್ರಮಗಳ ನಡುವೆ ಸರ್ಕಾರದ ಕಲ್ಯಾಣ ಮತ್ತು ಅಭಿವೃದ್ಧಿ ಕಾರ್ಯಕ್ರಮಗಳ ಪ್ರಚಾರದ ಕಾರ್ಯಾಗಾರಗಳನ್ನು ಏರ್ಪಡಿಸಲು ಸರ್ಕಾರ ಚಿಂತಿಸುವುದೇ ?

## ಬೆಂಗಳೂರು ವಿಶ್ವವಿದ್ಯಾಲಯವನ್ನು ವಿಭಜಿಸುವುದು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೩೩ (೧೨೪೮) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿಶ್ವವಿದ್ಯಾಲಯವನ್ನು ವಿಭಜಿಸುವ ನಿಟ್ಟಿನಲ್ಲಿ ಸರ್ಕಾರ ಮುಂದಾಗಿರುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ, ಈ ಸಂಬಂಧ ಯಾವ ಯಾವ ಸರ್ಕಾರಿ ಆದೇಶಗಳನ್ನು ಹೊರಡಿಸಲಾಗಿದೆ ;

(ಇ) ಯಾವ ರೀತಿಯ ಸೂಕ್ತ ಕ್ರಮಗಳನ್ನು ಇಲ್ಲಿಯವರೆಗೆ ಕೈಗೊಳ್ಳಲಾಗಿದೆ ;

(ಈ) ಈ ಸಂಬಂಧ ಉಪಸಮಿತಿ ರಚಿಸಲಾಗಿದೆಯೇ ;

(ಉ) ಬೆಂಗಳೂರು ವಿಶ್ವವಿದ್ಯಾಲಯವನ್ನು ಕುರಿತಂತೆ ಈ ವಿಚಾರದಲ್ಲಿ ಮುಂದೆ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುವುದು ;

(ಊ) ಬಿಎಡ್ ಮತ್ತು ಎಂಎಡ್ ಶಿಕ್ಷಣಕ್ಕಾಗಿ ಪ್ರತ್ಯೇಕ ವಿಶ್ವವಿದ್ಯಾಲಯವನ್ನು ತೆರೆಯುವ ಕುರಿತು ಸರ್ಕಾರ ಮುಂದಾಗುವುದೇ ?

**ಶಿಕ್ಷಕರ ನೇಮಕಾತಿ ಕುರಿತು**

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೩೪ (೧೨೬೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಪ್ರಾಥಮಿಕ ಶಾಲೆಗೆ ಹೊಸದಾಗಿ ಎಷ್ಟು ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಉದ್ದೇಶಿಸಲಾಗಿದೆ ;

(ಆ) ಖಾಲಿ ಇರುವ ಶಿಕ್ಷಕರ ಹುದ್ದೆಗೆ ಸಕಾಲಕ್ಕೆ ನೇಮಕ ಮಾಡಿಕೊಳ್ಳಲು ಸರ್ಕಾರ ನಿರ್ಧರಿಸಿದೆಯೇ ;

(ಇ) ಹಾಗಿದ್ದಲ್ಲಿ, ನೇಮಕ ಪ್ರಕ್ರಿಯೆ ಆರಂಭವಾಗಿದೆಯೇ ; ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜುವರೆಗೆ ಒಟ್ಟು ಎಷ್ಟು ಶಿಕ್ಷಕರು ನೇಮಕವಾಗಲಿದ್ದಾರೆ ;

(ಈ) ಈ ವರ್ಷ ರಾಜ್ಯಾದ್ಯಂತ ಎಷ್ಟು ಶಿಕ್ಷಕರು ನಿವೃತ್ತಿಯಾಗಲಿದ್ದಾರೆ ; ನಿವೃತ್ತಿಯಾಗುವ ಶಿಕ್ಷಕರು ಸೇರಿದಂತೆ ರಾಜ್ಯದಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆಗಳು ಎಷ್ಟು ; ಎಷ್ಟು ದಿನಗಳಲ್ಲಿ ಭರ್ತಿ ಮಾಡಲಾಗುವುದು ;

(ಉ) ಪತಿ–ಪತ್ನಿ ಪ್ರಕರಣದ ವರ್ಗಾವಣೆ ಸೇರಿದಂತೆ ರಾಜ್ಯದಲ್ಲಿ ಎಷ್ಟು ಶಿಕ್ಷಕರ ವರ್ಗಾವಣೆ ಬಾಕಿ ಇದೆ ; ಈ ಪ್ರಕ್ರಿಯೆ ಯಾವಾಗ ಪೂರ್ಣಗೊಳ್ಳಲಿದೆ ;

(ಊ) ಶಿಕ್ಷಕರ ವರ್ಗಾವಣೆಗೆ ಸುಗ್ರೀವಾಜ್ಞೆ ಜಾರಿಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಪತಿ–ಪತ್ನಿ ಪ್ರಕರಣದ ವರ್ಗಾವಣೆಗೆ ಹೊಸ ಕಾನೂನು ಜಾರಿಗೆ ತರಲಾಗುವುದೇ ? (ವಿವರ ನೀಡುವುದು)

## ರಾಜ್ಯದಲ್ಲಿರುವ ಸರ್ಕಾರೇತರ ಶಾಲೆಗಳ ವಿವರ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೧೩೫ (೧೨೪೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರೇತರ ಕನ್ನಡ ಮತ್ತು ಸೆಂಟ್ರಲ್ ಸಿಲೆಬಸ್ ಶಾಲೆಗಳ ಸಂಖ್ಯೆ ಎಷ್ಟು ; ಅವು ಯಾವುವು ; ಎಲ್ಲೆಲ್ಲಿ ಇವೆ ; (ವಿವರ ನೀಡುವುದು)

(ಆ) ಇಂತಹ ಶಾಲೆಗಳ ಆಡಳಿತ ಮಂಡಳಿಯಲ್ಲಿ ಇರುವವರು ಯಾರ್‍ಯಾರು ; (ಶಾಲಾವಾರು ವಿವರ ನೀಡುವುದು) ಈ ಶಾಲೆಗಳನ್ನು ನಿಯಂತ್ರಿಸಲು ರಾಜ್ಯ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 1081, ಪ್ರತಿಗಳು– 1076 – ಪಿ8